# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

KANNADA POST

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನ ಪತ್ರಿಕೆ Kannada Daily

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 241 | Pages. 2 | Date: 07-08-2025, THURSDAY | RNI NO: KARKAN/2024/89601

ಸಂಪುಟ : 01 - ಸಂಚಿಕೆ : 241 - ಪುಟಗಳು : 2 07-08-2025 ಗುರುವಾರ | Ph: 8762954248 | ದರ : ₹1


# ಮೂರ್ಕಣ್ಣು ಗುಡ್ಡ ಜನರ ಮೇಲೆ ಅರಣ್ಯ ಇಲಾಖೆ ಪ್ರಹಾರ

## ಸ್ಥಳೀಯರಿಂದ ಬೃಹತ್ ಪ್ರತಿಭಟನೆ | ಪ್ರಬಲ ಹೋರಾಟದ ಎಚ್ಚರಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಅಧಿಸೂಚನೆ 4ರ ಹೆಸರಿನಲ್ಲಿ ಮೂರ್ಕಣ್ಣು ಗುಡ್ಡ ಜನರ ಮೇಲೆ ಅರಣ್ಯ ಇಲಾಖೆ ಪ್ರಹಾರ ನಡೆಸುತ್ತಿದೆ ಎಂದು ಆರೋಪಿಸಿ ಮಾಜಿ ಶಾಸಕ ಹೆಚ್.ಎಂ. ವಿಶ್ವನಾಥ್ ನೇತೃತ್ವದಲ್ಲಿ ಬುಧವಾರ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಹೆಚ್.ಎಂ. ವಿಶ್ವನಾಥ್ ಮಾತನಾಡಿ, 1920ರಲ್ಲಿ ಅಂದಿನ ಮೈಸೂರು ಸರ್ಕಾರ 8 ಗ್ರಾಮಗಳ 7938 ಎಕರೆಯನ್ನು ಅಭಯಾರಣ್ಯ ಮಾಡುವ ನಿಟ್ಟಿನಲ್ಲಿ ಸೆಕ್ಷನ್ 4 ಅನ್ನು ಜಾರಿಗೊಳಿಸಿತ್ತು. ಸರ್ಕಾರದ ಈ ನಡೆ ವಿರೋಧಿಸಿ ಸ್ಥಳೀಯರು ಸರ್ಕಾರಕ್ಕೆ ಮನವಿ ಸಲ್ಲಿಸಿದ ಹಿನ್ನೆಲೆಯಲ್ಲಿ 1924ರಲ್ಲಿ ಈ ವ್ಯಾಪ್ತಿಯನ್ನು ಸೆಕ್ಷನ್ 4 ರಿಂದ





ಕೈಬಿಟ್ಟಿದೆ. ಶತಮಾನ ಕಳೆದ ನಂತರ ಈ ಯೋಜನೆಗೆ ಮರುಜೀವ ನೀಡಿರುವ ಅರಣ್ಯ ಇಲಾಖೆ ಈ ಭಾಗವನ್ನು ಅಭಯಾರಣ್ಯ ಎಂದು ಘೋಷಿಸುವ ನಿಟ್ಟಿನಲ್ಲಿ ಹೆಜ್ಜೆ ಇಟ್ಟಿದೆ. ಶತಮಾನದ ನಂತರ ಈ ಯೋಜನೆ ಜಾರಿಗೆ ಮುಂದಾಗಿರುವ ಅರಣ್ಯ ಇಲಾಖೆಯ ನಡೆ ತಪ್ಪು. ಶತಮಾನದ ಅಂತರದಲ್ಲಿ ಹಲವು ತಲೆಮಾರುಗಳೇ ಕಳೆದಿದ್ದು ಅಂದು ಹಾಗೂ ಇಂದಿನ ಜನಾಂಗದ ನಡುವೆ ಹಲವು ಬದಲಾವಣೆ ಇದೆ ಎಂದರು.

### ಎತ್ತಿನಹೊಳೆ ಯೋಜನೆಗೆ ಅಡ್ಡಿ ಏಕೆ ಇಲ್ಲ

ಪ್ರಸ್ತಕ ದಿನಗಳಲ್ಲಿ ನಿತ್ಯ ಈ ಭಾಗದ ರೈತರಿಗೆ ಅರಣ್ಯ ಇಲಾಖೆ ಮಾನಸಿಕ ಹಿಂಸೆ ನೀಡುತ್ತಿದ್ದು ತೋಟ ಬೆಳೆಯುವಂತಿಲ್ಲ. ರಸ್ತೆ ನಿರ್ಮಿಸುವಂತಿಲ್ಲ, ಮನೆ ಕಟ್ಟುವಂತಿಲ್ಲ ಎಂಬೆಲ್ಲ ಕಟ್ಟುಪಾಡಿನಿಂದಾಗಿ ಭಾಗದ ಜನರಿಗೆ ಜೀವನವೇ ಬೇಸರ ಮೂಡಿಸಿದೆ. ಈ ಭಾಗದ 8 ಗ್ರಾಮಗಳ ವ್ಯಾಪ್ತಿಯಲ್ಲಿ 1920 ರಿಂದ ಹಂತ ಹತವಾಗಿ ರೈತರಿಗೆ ಸರ್ಕಾರಗಳು ಭೂಮಿ ಮಂಜೂರು ಮಾಡಿದೆ. ಫಾರಂ ನಂ. 50, 53ರಲ್ಲಿ ಭೂಮಿ ಮಂಜೂರು ಮಾಡಲಾಗಿದೆ. 94 ಸಿಯಡಿ ಹಲವು ಬಡವರಿಗೆ ಮನೆ ನೀಡಲಾಗಿದೆ. ಮುಖ್ಯವಾಗಿ ಮೂರ್ಕಣ್ಣು ಗುಡ್ಡ ವ್ಯಾಪ್ತಿಯಲ್ಲೇ ಸರ್ಕಾರದ ಅತಿಮುಖ್ಯ ಯೋಜನೆಯಾದ ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆ ಜಾರಿಗೊಂಡಿದೆ. ಇಂತಹ ಹತ್ತು ಹಲವು ಯೋಜನೆಗಳು ಕಳೆದೊಂದು ಶತಮಾನದಲ್ಲಿ ಜಾರಿಯಾಗಿದೆ ಎಂದರು.

> ಕಾನೂನು ನೆಪದಲ್ಲಿ ಅರಣ್ಯ ಇಲಾಖೆ ಸ್ಥಳೀಯರನ್ನು ಒಕ್ಕಲೆಬ್ಬಿಸುವ ಪ್ರಯತ್ನಕ್ಕೆ ಮುಂದಾಗಿದೆ. ಯಾವ ಕಾರಣಕ್ಕೂ ಈ ದೌರ್ಜನ್ಯ ಸಹಿಸುವುದಿಲ್ಲ. ನ್ಯಾಯಕ್ಕಾಗಿ ನಾವು ಯಾವ ಮಟ್ಟದ ಹೋರಾಟ ಮಾಡಲು ಸಿದ್ಧ.
>
> **- ಹೆಚ್.ಎಂ. ವಿಶ್ವನಾಥ್, ಮಾಜಿ ಶಾಸಕ**

ಈ ಭಾಗದಲ್ಲಿ ಹಲವು ಬೃಹತ್ ಕಂಪನಿಗಳು ನೂರಾರು ಎಕರೆ ಒತ್ತುವರಿ ಮಾಡಿಕೊಂಡಿದ್ದಾರೆ. ಆದರೆ ಇವರ ತಂಟೆಗೆ ಹೋಗದ ಅರಣ್ಯ ಇಲಾಖೆ ಅಧಿಕಾರಿಗಳು ಸಣ್ಣ, ಮಧ್ಯಮ ಗಾತ್ರದ ರೈತರ ಜಮೀನು ಕಬಳಿಸಲು ಇಲ್ಲದ ಕಾರಣ ನೀಡುತ್ತಿದೆ. ವಿವಿಧ ಇಲಾಖೆಗಳಿಗೆ ಜಮೀನು ಮಂಜೂರು ಮಾಡಿರುವ ಬಗ್ಗೆ ಅರಣ್ಯ ಇಲಾಖೆ ಸಂಬಂಧಿತ ಇಲಾಖೆಗಳೊಂದಿಗೆ ಚರ್ಚೆ ನಡೆಸಬೇಕು. ಇದನ್ನು ಹೊರತುಪಡಿಸಿ ತಮ್ಮಷ್ಟಕ್ಕೆ ಇರುವ ರೈತರಿಗೆ ನೋಟಿಸ್ ನೀಡಿ ನೆಮ್ಮದಿ ಹಾಳು ಮಾಡಲಾಗುತ್ತಿದೆ ಎಂದು ದೂರಿದರು.

### ಅಭಯಾರಣ್ಯ ಅಸಾಧ್ಯದ ಮಾತು

ಮನವಿ ಸ್ವೀಕರಿಸಿದ ಶಾಸಕ ಸಿಮೆಂಟ್ ಮಂಜು ಮಾತನಾಡಿ, ಮೂರ್ಕಣ್ಣು ಗುಡ್ಡ ವ್ಯಾಪ್ತಿಯನ್ನು ಅಭಯಾರಣ್ಯ ಮಾಡುವ ನಿಟ್ಟಿನಲ್ಲಿ ನಿಯಮ ಬಾಹಿರವಾಗಿ ಸ್ಥಳೀಯರ ಮೇಲೆ ಅರಣ್ಯ ಇಲಾಖೆ ದೌರ್ಜನ್ಯ ಎಸಗುತ್ತಿರುವುದು ಬೇಸರದ ವಿಚಾರ. ಕಳೆದ ಕೆಲವು ದಿನಗಳ ಹಿಂದೆ ಸಂತ್ರಸ್ತರ ಸಭೆ ನಡೆಸಿ ಅಹವಾಲು ಸ್ವೀಕರಿಸಲಾಗಿದೆ. ಈ ವಿಚಾರದಲ್ಲಿ ನಾನು ಸ್ಥಳೀಯರ ಪರವಾಗಿರುತ್ತೇನೆ ಎಂದರು.



### ಕಿರುಕುಳ ನೀಡಿದರೆ ಸಹಿಸಲ್ಲ

ಅಭಯಾರಣ್ಯ ಎಂದು ಘೋಷಿಸುವ ಮುನ್ನ ಸೆಕ್ಷನ್ 1 ರಿಂದ 17ರ ವರೆಗೆ ಹಲವು ನಿಯಮಗಳನ್ನು ಜಾರಿಗೊಳಿಸಬೇಕು. ಆದರೆ ಯಾವುದೇ ನಿಯಮಗಳು ಪಾಲನೆಯಾಗದೆ ಸ್ಥಳೀಯರನ್ನು ಇಲ್ಲಿಂದ ಒಕ್ಕಲೆಬ್ಬಿಸಲು ವ್ಯವಸ್ಥಿತ ಪ್ರಯತ್ನಗಳು ನಡೆದಿವೆ. ಯಾವ ಕಾರಣಕ್ಕೂ ಇಲ್ಲಿನ ಭೂಮಿಯನ್ನು ಅರಣ್ಯ ಇಲಾಖೆಗೆ ಬಿಟ್ಟುಕೊಡುವ ಪ್ರಶ್ನೆಯೆ ಇಲ್ಲ. ಅರಣ್ಯ ಇಲಾಖೆ ಸೆಕ್ಷನ್ 4ರ ಹೆಸರಿನಲ್ಲಿ ರೈತರಿಗೆ ಕಿರುಕುಳ ನೀಡಿದರೆ, ಸಂತ್ರಸ್ತರ ಪರವಾಗಿ ಯಾವುದೇ ಮಟ್ಟದ ಹೋರಾಟಕ್ಕೂ ನಾವು ಸಿದ್ಧರಿದ್ದೇವೆ ಎಂದು ಎಚ್ಚರಿಸಿದರು.

ತಹಶೀಲ್ದಾರ್ ಸುಪ್ರೀತಾ ಅವರಿಗೆ ಮನವಿ ಸಲ್ಲಿಸಲಾಯಿತು. ಹೋರಾಟಗಾರರಾದ ಪೂರ್ಣೇಶ್ ಹಟ್ಟಿಬೆಟ್ಟ, ಸ್ಟೋನ್ ವ್ಯಾಲಿ ಸುಭಾಷ್, ಓಂಕುಮಾರ್, ಮಹೇಶ್, ಅರವಿಂದ್, ಪೂರ್ಣ, ಜಯಶ್ರಿ, ಇತರರಿದ್ದರು.

# ಒಂದು ದಿನವೂ ಕಾಂಗ್ರೆಸ್ ಬಾವುಟ ಹಿಡಿಯದವರಿಂದ ಹುಡಾ ಅಧ್ಯಕ್ಷ ಸ್ಥಾನಕ್ಕಾಗಿ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಹುಡಾ ಅಧ್ಯಕ್ಷ ಸ್ಥಾನವನ್ನು ಮುಸ್ಲಿಂ ಮುಖಂಡರಿಗೆ ಕೊಡಬೇಕು ಎಂದು ಬುಧವಾರ ನಡೆದ ಹೋರಾಟದಲ್ಲಿ ಪ್ರತಿಭಟನಾಕಾರರು ತಾಜಿಂ ಎಂಬುವರನ್ನು ಬೆಂಬಲಿಸಿರುವುದಕ್ಕೆ ಕಾಂಗ್ರೆಸ್ ಪಕ್ಷದ ಮುಖಂಡರಿಂದಲೇ ಆಕ್ಷೇಪಣೆ ವ್ಯಕ್ತವಾಗಿದೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಹಾಸನ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕಯ್ಯೂಂ, ಹುಡಾ ಅಧ್ಯಕ್ಷ ಸ್ಥಾನ ಮುಸ್ಲಿಂ ಮುಖಂಡರಿಗೆ ಕೊಡಬೇಕು ಎನ್ನುವುದು ನ್ಯಾಯಯುತ ಬೇಡಿಕೆಯಾಗಿದೆ.

ಆದರೆ ಪಕ್ಷದಲ್ಲಿ ದುಡಿದವರು, ಪಕ್ಷಕ್ಕೋಸ್ಕರ ಕೆಲಸ ಮಾಡಿದವರು. ಚುನಾವಣೆಗಳಲ್ಲಿ ಕಷ್ಟಪಟ್ಟು ಕೆಲಸ ಮಾಡಿದ ಬಹಳ ಮುಖಂಡರು ನಮ್ಮ ಪಕ್ಷದಲ್ಲಿ ಇದ್ದಾರೆ. ಅವರಲ್ಲಿ ಯಾರಾದರು ಒಬ್ಬರನ್ನ ಆಯ್ಕೆ ಮಾಡಿ ಅವರಿಗೆ ಅವಕಾಶ ಕೊಡಬಹುದು.

ಆದರೆ ಪ್ರತಿಭಟನೆ ಮಾಡಿದ ಯಾರೂ ಒಂದೇ ಒಂದು ದಿನವೂ ಕಾಂಗ್ರೆಸ್ ಪಕ್ಷದ ಬಾವುಟ ಹಿಡಿದಿಲ್ಲ, ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪರ ಒಂದು ಮತವನ್ನೂ ಕೇಳಿಲ್ಲ, ಒಂದು ದಿನವೂ ಕಾಂಗ್ರೆಸ್ ಕಚೇರಿಗೇ ಬಂದಿಲ್ಲ ಎಂದು ಆರೋಪಿಸಿದ್ದಾರೆ.

ಹಾಗಿದ್ದರೆ ಇಂದು ಪ್ರತಿಭಟನೆ ಮಾಡಿದ ಇವರು ಯಾರು ಎನ್ನುವುದು ನಿಷ್ಠಾವಂತ ಕಾಂಗ್ರೆಸ್ ಕಾರ್ಯಕರ್ತರ ಪ್ರಶ್ನೆಯಾಗಿದೆ. ಪಕ್ಷದಲ್ಲಿ ಇವರ ಸ್ಥಾನ ಏನು? ಕಾಂಗ್ರೆಸ್ ಪಕ್ಷದಲ್ಲಿ ಇವರ ಅಸ್ತಿತ್ವ ಏನು? ಪಕ್ಷಕ್ಕೆ ಇವರ ಕೊಡುಗೆ ಏನು? ಇವರು ಎಷ್ಟು ವರ್ಷದಿಂದ ಕಾಂಗ್ರೆಸ್ನಲ್ಲಿದ್ದಾರೆ? ಎನ್ನುವುದು ಯಕ್ಷಪ್ರಶ್ನೆಯಾಗಿದೆ. ಹಾಗಾಗಿ ಪಕ್ಷದಲ್ಲಿ ದುಡಿದ ಹಿರಿಯರಿಗೆ ಅವಕಾಶ ಮಾಡಿಕೊಡಬೇಕಾಗಿ ಈ ಮೂಲಕ ಪಕ್ಷದ ವರಿಷ್ಠರಲ್ಲಿ ಮನವಿ ಮಾಡುತ್ತೇವೆ ಎಂದಿದ್ದಾರೆ.

# ಸಂಘ ಅಭಿವೃದ್ಧಿಗೆ ಪಾರದರ್ಶಕ ವ್ಯವಹಾರ ಅಗತ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಯಾವುದೇ ಸಂಘ ಸಂಸ್ಥೆಗಳು ಪಾರದರ್ಶಕ ವ್ಯವಹಾರ ಹೊಂದಿದ್ದರೆ ಪ್ರಗತಿ ಕಾಣಲು ಸಾಧ್ಯ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಮತಿಘಟ್ಟ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆಯಾದ ಸಬ್ಬನಹಳ್ಳಿ ಗಂಗಾಧರ್ ಅವರನ್ನು ಬುಧವಾರ ಅಭಿನಂದಿಸಿ ಮಾತನಾಡಿ, ವ್ಯವಹಾರದಲ್ಲಿ ನಂಬಿಕೆ ಹಾಗೂ ವಿಶ್ವಾಸ ಪ್ರಮುಖ ಪಾತ್ರ ವಹಿಸಲಿದೆ ಎಂದರು.

ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ತಾಲ್ಲೂಕಿನ ಬಹುತೇಕ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ಸಾಲ ಸೌಲಭ್ಯ ಕಲ್ಪಿಸಲಾಗಿದೆ. ಅಲ್ಲದೆ ಸ್ವಸಹಾಯ ಸಂಘಗಳಿಗೂ ಕಡಿಮೆ ಬಡ್ಡಿ ದರದಲ್ಲಿ



ಸಾಲ ಒದಗಿಸಲಾಗಿದೆ ಎಂದು ತಿಳಿಸಿದರು.

ಕೇವಲ 10 ಗುಂಟೆ ಕೃಷಿ ಜಮೀನು ಹೊಂದಿರುವ ರೈತರಿಗೂ ಸಹ ಸಾಲ ನೀಡುವ ವ್ಯವಸ್ಥೆ ಮಾಡಲಾಗಿದೆ. ಬಹುತೇಕ ಸಂಘಗಳ ಮೂಲಕ ಪಹಣಿ ವಿತರಣೆಗೂ ಅವಕಾಶ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಿದರು. ಇನ್ನು ಸಂಕಷ್ಟದಲ್ಲಿದ್ದ ರೈತರಿಗೆ ಹೈನುಗಾರಿಕೆ ವರವಾಗಿ ಪರಿಣಮಿಸಿದೆ.

ಇಂದು ತಾಲೂಕಿನ ಪ್ರತಿ ಕುಟುಂಬಗಳು ಹೈನುಗಾರಿಕೆಯಲ್ಲಿ ತೊಡಗುವ ಮೂಲಕ ತಮ್ಮ ಬದುಕನ್ನು ಆರ್ಥಿಕವಾಗಿ ಸದೃಢಗೊಳಿಸಿಕೊಂಡಿರುವುದು ವಿಶೇಷ ಸಂಗತಿ ಎಂದರು.

ಅಧ್ಯಕ್ಷ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆಯಾದ ಸಬ್ಬನಹಳ್ಳಿ ಗಂಗಾಧರ್ ಅವರನ್ನು ಶಾಸಕರು ಹಾಗೂ ಸಂಘದ ವತಿಯಿಂದ ಅಭಿನಂದಿಸಲಾಯಿತು. ಮಾಜಿ ಅಧ್ಯಕ್ಷರಾದ ಎ.ಜಿ.ಪ್ರಭಾಕರ್, ಶ್ರೀಕಂಠೇಗೌಡ, ಗಿರೀಶ್, ಕಾಂತರಾಜ್, ಸುನೀಲ್, ಗ್ರಾಮ ಪಂಚಾಯಿತಿ ಸದಸ್ಯ ಯಧುರಾಜ್ ಸಹಕಾರ ಇಲಾಖೆ ಅಧಿಕಾರಿ ಮಧು ಮತ್ತಿತರರಿದ್ದರು.

# ಜನ ಸ್ಪಂದನ ಸಭೆ ಪ್ರಯೋಜನ ಪಡೆಯಿರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಕಂದಾಯ ಸೇರಿ ಹಲವು ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳಿರುವ ಸಾರ್ವಜನಿಕರು ಜನ ಸ್ಪಂದನ ಸಭೆಯಲ್ಲಿ ಅಹವಾಲು ಸಲ್ಲಿಸಿ ಪರಿಹಾರ ಕಂಡುಕೊಳ್ಳಬೇಕು ಎಂದು ಸಕಲೇಶಪುರ ಉಪವಿಭಾಗಾಧಿಕಾರಿ ಶ್ರುತಿ ಕರೆ ನೀಡಿದರು.

ಪಟ್ಟಣದ ಮಿನಿ ವಿಧಾನಸೌಧ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ತಾಲ್ಲೂಕು ಮಟ್ಟದ ಜನ ಸ್ಪಂದನ ಸಭೆ ಉದ್ಘಾಟಿಸಿ ಮಾತನಾಡಿ, ರಾಜ್ಯ ಸರ್ಕಾರದ ನಿರ್ದೇಶನದಂತೆ ತಿಂಗಳಿಗೆ ಎರಡು ಬಾರಿ ಜನ ಸ್ಪಂದನ ಕಾರ್ಯಕ್ರಮ ನಡೆಯಲಿದೆ. ಗ್ರಾಮೀಣ ಭಾಗದ ಸಮಸ್ಯೆಗಳನ್ನು ಪರಿಶೀಲಿಸಿ ಪರಿಹಾರ ನೀಡಲಾಗುವುದು ಎಂದರು.



ತಹಶೀಲ್ದಾರ್ ಮಲ್ಲಿಕಾರ್ಜುನ್ ಮಾತನಾಡಿ, ಜನಸಾಮಾನ್ಯರು ತಮ್ಮ ಸಮಸ್ಯೆಗಳ ಬಗ್ಗೆ ನೀಡಿದ ಅರ್ಜಿಗಳನ್ನು ಸಂಬಂಧಿಸಿದ ಅಧಿಕಾರಿಗಳು ನಿರ್ಲಕ್ಷ್ಯ ವಹಿಸದೆ ಶೀಘ್ರ ಸ್ಪಂದಿಸಬೇಕು. ಜನ ಸ್ಪಂದನ ಸಭೆಗಳು ಜನರಿಗೆ ಸಹಕಾರಿಯಾಗಬೇಕು. ಸಾರ್ವಜನಿಕರ ಕೆಲವು ಸಣ್ಣ-ಪುಟ್ಟ ಸಮಸ್ಯೆಗಳಾದ ಖಾತೆ ಬದಲಾವಣೆ, ಹಕ್ಕುಪತ್ರ ವಿತರಣೆ, ಪ್ರಮಾಣ ಪತ್ರ, ಸೇರಿ ಮತ್ತಿತರ ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸಬೇಕು. ಹಣಕಾಸಿನ ಅವಶ್ಯವಿರುವ ಸಮಸ್ಯೆಗಳನ್ನು ಸಂಬಂಧಪಟ್ಟ ಇಲಾಖೆಯ ಗಮನಕ್ಕೆ ತಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದಾಗ ಸರ್ಕಾರದ ಮಟ್ಟದಲ್ಲಿ ಅವುಗಳನ್ನು ಇತ್ಯರ್ಥ ಪಡಿಸಲಾಗುವುದು. ಜನರ ದೈನಂದಿನ ಸಮಸ್ಯೆಗಳ ಅರ್ಜಿಗಳನ್ನು ಸ್ಥಳೀಯ ಹಂತದಲ್ಲಿ ಪರಿಹರಿಸಲಾಗುವುದು ಎಂದರು.

ಬಸ್ ಸೌಲಭ್ಯ, ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಶುಶ್ರೂಷಕಿ ನೇಮಿಸುವುದು, ವಿದ್ಯುತ್ ಸಂಪರ್ಕ ಕಲ್ಪಿಸುವುದು, ಅಪಾಯಕಾರಿ ಮರಗಳನ್ನು ತೆರವು, ರಸ್ತೆ ದುರಸ್ತಿ, ನೀರಿನ ಸೌಲಭ್ಯ, ಸರ್ಕಾರಿ ಸ್ಥಳ ಅತಿಕ್ರಮಣ, ಕಟ್ಟಡಗಳ ಸಕ್ರಮ, ಖಾತೆ ಬದಲಾವಣೆ, 94 ಸಿ ಹಾಗೂ ಬಗರ್ ಹುಕುಂನಲ್ಲಿ ಅರ್ಜಿ ಸಲ್ಲಿಸಿರುವ ರೈತರಿಗೆ ಹಕ್ಕುಪತ್ರ ಮತ್ತು ಸಾಗುವಳಿ ಚೀಟಿ ವಿತರಣೆ ಸೇರಿದಂತೆ ಸುಮಾರು 47 ಅಹವಾಲು ಸಲ್ಲಿಕೆಯಾಗಿದವು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ. ನಿಸಾರ್ ಫಾತಿಮಾ, ಕ್ಷೇತ್ರ ಶಿಕ್ಷಣಾಧಿಕಾರಿ ಎ.ಜೆ. ಕೃಷ್ಣೇಗೌಡ, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಾಯಕ ನಿರ್ದೇಶಕ ರಮೇಶ್, ಪಿಎಸ್ಐ ಪ್ರವೀಣ್ ಕುಮಾರ್ ಹಾಜರಿದ್ದರು.

# ಭಾರತದ ಸಂಸ್ಕೃತಿಗೆ ಸನಾತನ ಧರ್ಮ ಪ್ರೇರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಭಾರತದ ಸಂಸ್ಕೃತಿಯು ಸನಾತನ ಹಿಂದು ಧರ್ಮದ ತಳಹದಿಯ ಮೇಲೆ ನಿಂತಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಸೋರೆಕಾಯಿ ಪುರ ಗ್ರಾಮದಲ್ಲಿ ಜೀರ್ಣೋದ್ಧಾರಗೊಂಡಿರುವ ಶ್ರೀ ಮಲ್ಲಿಗಮ್ಮ, ಶ್ರೀ ದುರ್ಗಮ್ಮ, ಶ್ರೀ ಮುನೇಶ್ವರ ಹಾಗೂ ಶ್ರೀ ಮಾರಿಯಮ್ಮ ದೇವಿ ದೇಗುಲ ಲೋಕಾರ್ಪಣೆ ಹಾಗೂ ದೇವರ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮದಲ್ಲಿ ಮಾತನಾಡಿ, ಪ್ರತಿ ಗ್ರಾಮಗಳಲ್ಲಿಯೂ ದೇಗುಲ ಹಾಗೂ ಶಾಲೆಗಳು ಇರಬೇಕು. ದೇಗುಲದ ಗಂಟೆ ಹಾಗೂ ಶಾಲೆಯ ಗಂಟೆ ಶಬ್ದ ಮೊಳಗಬೇಕು. ಶಾಲೆಯಿಂದ ಶಿಕ್ಷಣ ಮತ್ತು ದೇಗುಲಗಳಿಂದ ಧರ್ಮ,




ಸಂಸ್ಕೃತಿ ಹಾಗೂ ಸಂಸ್ಕಾರ ಬೆಳೆಯುತ್ತದೆ ಎಂದರು.

ಇತ್ತೀಚಿನ ವರ್ಷಗಳಿಂದ ತಾಲ್ಲೂಕಿನಾದ್ಯಂತ ಬಹುತೇಕ ದೇಗುಲಗಳು ಜೀರ್ಣೋದ್ಧಾರದೊಂದಿಗೆ ಲೋಕಾರ್ಪಣೆಗೊಂಡಿವೆ. ದೇಗುಲಗಳ ನಿರ್ಮಾಣಕ್ಕೆ ಶಾಸಕರ ನಿಧಿ ಹಾಗೂ ವೈಯಕ್ತಿಕವಾಗಿ ಸಾಕಷ್ಟು ಅನುದಾನ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಧಾರ್ಮಿಕ ಕಾರ್ಯಕ್ರಮಗಳು: ದೇಗುಲಗಳ ಲೋಕಾರ್ಪಣೆ ಹಿನ್ನೆಲೆ ಮುಂಜಾನೆಯೇ ಹಸಿರು ಚಪ್ಪರ ಹಾಕಲಾಗಿದ್ದು ತಳಿರು-ತೋರಣಗಳಿಂದ ಸಿಂಗರಿಸಲಾಗಿತ್ತು. ಮೊದಲಿಗೆ ವಿಘ್ನೇಶ್ವರ ಹಾಗೂ ಗಂಗಾ ಪೂಜೆ ನೆರವೇರಿತು. ನಂತರ ದುರ್ಗಾ ಹೋಮ, ಮೃತ್ಯುಂಜಯ ಹೋಮ, ವೀರಭದ್ರೇಶ್ವರ ಸಮೇತ ವೀರಗಾಸೆಯೊಂದಿಗೆ ಕುಂಭ ಕಳಸರಾಧನೆ ಬಳಿಕ ಮಲ್ಲಿಗೆಮ್ಮ ದೇವಾಲಯ ಪ್ರವೇಶ ಮತ್ತು ಬಿಂಬ ಸೋಮ ಕ್ಷಯನವಾಸ ಹಾಗೂ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳು ನೆರವೇರಿದವು. ಕಲಶ ಉತ್ಸವದಲ್ಲಿ ವೀರಗಾಸೆ ಕುಣಿತವು ನೋಡುಗರ ಗಮನ ಸೆಳೆಯಿತು.

ಗ್ರಾಮ ಪಂಚಾಯಿತಿ ಸದಸ್ಯೆ ರಾಣಿ, ಮಾಜಿ ಅಧ್ಯಕ್ಷ ಚಂದ್ರು, ಜಿಕೆವಿಕೆಯ ನಿವೃತ್ತ ಅಧಿಕಾರಿ ಮತಿಘಟ್ಟ ದೇವರಾಜು, ದೇವಸ್ಥಾನದ ವ್ಯವಸ್ಥಾಪಕ ಮೇಗಲಮನೆ ನಂಜುಂಡೇಗೌಡ ಮತ್ತು ಪುಟ್ಟಸ್ವಾಮಿಗೌಡ, ಪ್ರಮುಖರಾದ ಚೇತನ್, ಪಟೇಲ್ ಸಣ್ಣತಮ್ಮೇಗೌಡ ಮತ್ತಿತರರಿದ್ದರು.

# ಹಗರೆ ಗ್ರಾಪಂಗೆ ಮುದ್ದು ಕೃಷ್ಣಪ್ಪ ಅಧ್ಯಕ್ಷೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಮಾದೀಹಳ್ಳಿ ಹೋಬಳಿ ಹಗರೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಸಿಳ್ಳೆಕ್ಯಾತ ಜನಾಂಗದ ಮುದ್ದು ಕೃಷ್ಣಪ್ಪ ಅವಿರೋಧ ಆಯ್ಕೆಯಾಗಿದ್ದರೆ.

ಒಂದು ತಿಂಗಳ ಹಿಂದೆ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಬುಧವಾರ ಚುನಾವಣೆ ಪ್ರಕ್ರಿಯೆ ನಡೆಯಿತು.

20 ಸದಸ್ಯರಿರುವ ಗ್ರಾಮ ಪಂಚಾಯಿತಿಯಲ್ಲಿ ಮುದ್ದು ಕೃಷ್ಣಪ್ಪ ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸಲಿಲ್ಲ. ಚುನಾವಣಾಧಿಕಾರಿ ವಸಂತಕುಮಾರ್ ಆಯ್ಕೆ ಘೋಷಿಸಿದರು. 12 ಸದಸ್ಯರು ಪ್ರಕ್ರಿಯೆಲ್ಲಿ ಪಾಲ್ಗೊಂಡಿದ್ದರು.

ತಾಲ್ಲೂಕು ಬಿಜೆಪಿ ಮುಖಂಡ ಡಿಶಾಂತಕುಮಾರ್ ಮಾತನಾಡಿ, ಸಮಾಜದ ಕಟ್ಟ ಕಡೆಯ ವ್ಯಕ್ತಿಗೆ ನ್ಯಾಯ ಸಿಗಬೇಕು ಎಂಬುದು ಅಂಬೇಡ್ಕರ್ ಅವರ ಧ್ಯೇಯ. ಅದರಂತೆ ಹಗರೆ ಗ್ರಾಮ ಪಂಚಾಯಿತಿಯಲ್ಲಿ ಸದಸ್ಯರಾಗಿರುವ ಬುಡಕಟ್ಟು ಜನಾಂಗದ ಸಿಳ್ಳೆಕ್ಯಾತ ಸಮುದಾಯಕ್ಕೆ ಸೇರಿದ ಮಹಿಳೆಯಾದ ಮುದ್ದು ಕೃಷ್ಣಪ್ಪ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಹೇಳಿದರು.

ಸದಸ್ಯರಾದ ಮಂಜುನಾಥ್, ಪ್ರಭ ಮಹೇಶ್, ಪುಷ್ಪ ಹರೀಶ್, ಜಯಮ್ಮ ರಾಜ್ ಕುಮಾರ್, ಪಾಮತಿ ಅನಿಲ್, ಲಕ್ಷ್ಮಮ್ಮ, ಸವಾಸಿಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಶೇಖರ್ ಗೌಡ, ಹಗರೆ ಕೃಷಿ ಪತ್ತಿನ ಸಹಕಾರ ಸಂಘದ ಸದಸ್ಯ ಸಂಕೇತ್ ಮತ್ತಿತರರಿದ್ದರು.

# ಹಿಮ್ಸ್ ಕ್ರಿಟಿಕಲ್ ಕೇರ್ ಸೆಂಟರ್‌ಗೆ ಭೂಮಿಪೂಜೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಆವರಣದಲ್ಲಿ ಕೇಂದ್ರ ಸರ್ಕಾರದ ಅನುದಾನದ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಕ್ರಿಟಿಕಲ್ ಕೇರ್ ಸೆಂಟರ್ ಕಾಮಗಾರಿಗೆ ಸ್ಥಳೀಯ ಶಾಸಕ ಹೆಚ್.ಪಿ. ಸ್ವರೂಪ್ ಭೂಮಿಪೂಜೆ ನೆರವೇರಿಸಿದರು.

ಸುಮಾರು 13 ಕೋಟಿ ರೂ. ವೆಚ್ಚದಲ್ಲಿ ನಡೆಯುತ್ತಿರುವ ಕಾಮಗಾರಿಗೆ ಅಧಿಕಾರಿಗಳ ಸಮ್ಮುಖದಲ್ಲಿ ಭೂಮಿ ಪೂಜೆ ನೆರವೇರಿಸಿ, ಬಳಿಕ ಸುಮಾರು 6 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ವೈದ್ಯಕೀಯ ವಿದ್ಯಾರ್ಥಿಗಳ ವಸತಿ ನಿಲಯದ ಹೆಚ್ಚುವರಿ ಕಟ್ಟಡಕ್ಕೂ ಅವರು ಶಂಕುಸ್ಥಾಪನೆ ನೆರವೇರಿಸಿದರು.



ಬಳಿಕ ಮಾತನಾಡಿದ ಅವರು, ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನ ಹಾಗೂ ಶಾಸಕರ ಅನುದಾನದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿವೆ. ಅದರಂತೆ ಇಂದು ಹಾಲುವಾಗಿಲು ಗ್ರಾಮದಲ್ಲಿ ಅಂಗನವಾಡಿ, ರಸ್ತೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದರು.

ಹಿಮ್ಸ್ ಆವರಣದಲ್ಲಿಯೂ ಕ್ರಿಟಿಕಲ್ ಕೇರ್ ಸೆಂಟರ್ ಸ್ಥಾಪನೆಗೆ ಕೇಂದ್ರದಿಂದ ಸಾಕಷ್ಟು ಅನುದಾನ ಬಂದಿದ್ದು, ಕಾಮಗಾರಿ ನಡೆಯುತ್ತಿದೆ. ಕಾಮಗಾರಿಗಳಲ್ಲಿ ಗುಣಮಟ್ಟ ಕಾಯ್ದುಕೊಂಡು ಒಳ್ಳೆಯ ಕೆಲಸ ಮಾಡುವಂತೆ ಸೂಚನೆ ನೀಡಲಾಗಿದೆ ಎಂದರು.

# ಸೈಯದ್ ತಾಜಿಂಗೆ ಹುಡಾ ಅಧ್ಯಕ್ಷ ಸ್ಥಾನ ನೀಡಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸ್ಥಾನಕ್ಕೆ ಸೈಯದ್ ತಾಜಿಂ ಅವರನ್ನು ನೇಮಕ ಮಾಡಬೇಕು ಎಂದು ಮುಸ್ಲಿಂ ಬಾಂಧವರು ನಗರದಲ್ಲಿ ಬುಧವಾರ ಬೃಹತ್ ಪ್ರತಿಭಟನೆ ನಡೆಸಿದರು.

ಹೇಮಾವತಿ ಪ್ರತಿಮೆಯಿಂದ ಜಿಲ್ಲಾಧಿಕಾರಿ ಕಚೇರಿ ವರೆಗೆ ಮೆರವಣಿಗೆಯಲ್ಲಿ ಬಂದ ಪ್ರತಿಭಟನಾಕಾರರು, ಮುಸ್ಲಿಂ ಸಮುದಾಯ ರಾಜಕೀಯ ಮತ್ತು ಆಡಳಿತಾತ್ಮಕ ಕ್ಷೇತ್ರಗಳಲ್ಲಿ ಗಣನೀಯವಾಗಿ ಹಿಂದುಳಿದಿದೆ. ಈ ಸಮುದಾಯ ಸಮಾಜದ ಮುಖ್ಯ ವಾಹಿನಿಯಲ್ಲಿ ಸಮಾನವಾಗಿ ಭಾಗವಹಿಸಲು, ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಏಳಿಗೆ ಸಾಧಿಸಲು ರಾಜಕೀಯ ಅಧಿಕಾರ




ಅತ್ಯಗತ್ಯವಾಗಿದೆ ಎಂದರು.

ಕಳೆದ ಲೋಕಸಭೆ ಚುನಾವಣೆಯಲ್ಲಿ ಜಿಲ್ಲೆಯ 1.35 ಲಕ್ಷ ಮುಸ್ಲಿಂ ಮತಗಳು ಕಾಂಗ್ರೆಸ್ ಅಭ್ಯರ್ಥಿಗೆ ಚಲಾವಣೆ ಆಗಿವೆ. ಹುಡಾದಲ್ಲಿ 40 ವರ್ಷದಿಂದ ಮುಸ್ಲಿಂ ಸಮುದಾಯಕ್ಕೆ ಅವಕಾಶ ಸಿಕ್ಕಿಲ್ಲ. ಆದ್ದರಿಂದ ಈ ಬಾರಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಶಿವಕುಮಾರ್ ಹಾಗೂ ಉಸ್ತುವಾರಿ ಸಚಿವ ರಾಜಣ್ಣ ಅವರು ಈ ಸಮುದಾಯಕ್ಕೆ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಸೈಯದ್ ತಾಜಿಂ ಅವರಿಗೆ ಅವಕಾಶ ಮಾಡಿಕೊಡುವ ಸಾಮಾಜಿಕ ನ್ಯಾಯ ಪಾಲನೆ ಮಾಡಿ ಎಂದು ಕಳೆದ 6 ತಿಂಗಳಿಂದಲೂ ಎಲ್ಲರನ್ನೂ ಮನವಿ ಮಾಡುತ್ತಿದ್ದೇವೆ. ನಮ್ಮ ಬೇಡಿಕೆಗೆ ಸ್ಪಂದನೆ ಸಿಗದೇ ಇದ್ದರೆ ಪ್ರತಿಭಟನೆಯನ್ನು ಬೆಂಗಳೂರಿಗೆ ಸ್ಥಳಾಂತರಿಸಿ ಕೆಪಿಸಿಸಿ ಕಚೇರಿ, ಸಿಎಂ, ಡಿಸಿಎಂ ಮನೆ ಎದುರು ಧರಣಿ ನಡೆಸುತ್ತೇವೆ ಎಂದು ಎಚ್ಚರಿಸಿದರು.

# ಅಸ್ವಸ್ಥ ಪ್ರಕರಣ: ವರದಿಗೆ ಡಿಸಿ ಸೂಚನೆ

ಹಾಸನ: ಅರಸೀಕೆರೆ ತಾಲ್ಲೂಕಿನ ಅಮರಿಗಿರಿ ಮಾಲೇಕಲ್ ತಿರುಪತಿ ಬೆಟ್ಟದಲ್ಲಿ ಪ್ರಸಾದ ಸೇವಿಸಿ ಭಕ್ತರು ಅಸ್ವಸ್ಥಗೊಂಡ ಪ್ರಕರಣ ಸಂಬಂಧ ತನಿಖಾ ವರದಿ ಸಲ್ಲಿಸಲು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸಮಿತಿ ರಚಿಸಿದ್ದಾರೆ. ಜು. 13ರಂದು ನೆರವೇರಿದ ಮಹೋತ್ಸವದಲ್ಲಿ ಪ್ರಸಾದ ಸೇವಿಸಿ 69 ಭಕ್ತರು ಅಸ್ವಸ್ಥಗೊಂಡಿದ್ದರು. ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ಜಿಲ್ಲಾ ಅಂಕಿತ ಅಧಿಕಾರಿ, ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಪ್ರಾಧಿಕಾರ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ (ಅಭಿವೃದ್ಧಿ), ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಇಂಜಿನಿಯರ್, ಅರಸೀಕೆರೆ ತಹಶೀಲ್ದಾರ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ, ನಗರಸಭೆ ಆಯುಕ್ತ, ಪೊಲೀಸ್ ವೃತ್ತ ನಿರೀಕ್ಷಕ ಹಾಗೂ ಗ್ರಾಮಾಂತರ ಠಾಣೆ ಪಿಎಸ್ಐ ಪ್ರದೇಶಕ್ಕೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿ ಜಿಪಿಎಸ್ ಫೋಟೋ ಸಮೇತ ವರದಿ ಸಲ್ಲಿಸಬೇಕು ಎಂದು ಹೇಳಿದ್ದಾರೆ.

# ಹಾಡಹಗಲೇ ಚಿನ್ನಾಭರಣ ಕಳವು

ಚನ್ನರಾಯಪಟ್ಟಣ: ತಾಲ್ಲೂಕಿನ ಚಿಕ್ಕಗೊಂಡನಹಳ್ಳಿಯಲ್ಲಿ ಹಾಡಹಗಲೇ ಮನೆ ಬೀಗ ಮುರಿದು ಒಳನುಗ್ಗಿರುವ ಕಳ್ಳರು ನಗದು ಸೇರಿ 6.76 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿದ್ದಾರೆ.

ನಿವಾಸಿ ಮೈತ್ರ ಎಂಬುವವರು ಆ. 4ರ ಬೆಳಿಗ್ಗೆ ಮನೆಗೆ ಬೀಗ ಹಾಕಿಕೊಂಡು ಜಾನುವಾರುಗಳನ್ನು ಮೇಯಿಸುವುದಕ್ಕಾಗಿ ಜಮೀನಿಗೆ ತೆರಳಿದ್ದರು. ಸಂಜೆ 6 ಗಂಟೆಗೆ ಬಂದು ನೋಡಿದಾಗ ಮನೆಯ ಬೀಗ ಮುರಿದು ಕಳ್ಳತನ ಮಾಡಿರುವುದು ಗೊತ್ತಾಗಿದೆ. ಬೀರುವಿನಲ್ಲಿಟ್ಟಿದ್ದ 20 ಗ್ರಾಂ ತೂಕದ ಒಂದು ಜೊತೆ ಚಿನ್ನದ ಬಳೆ, 50 ಗ್ರಾಂ ತೂಕದ ಚಿನ್ನದ ಎರಡು ಎಳೆಯ ಮಾಂಗಲ್ಯ ಸರ, 5 ಗ್ರಾಂ ತೂಕದ ಚಿನ್ನದ ಅರಳಿನ ಕಿವಿಯೋಲೆ, 5 ಗ್ರಾಂ ತೂಕದ ಒಂದು ಜೊತೆ ಚಿನ್ನದ ಓಲೆ, 5 ಗ್ರಾಂ ತೂಕದ ಚಿನ್ನದ ಮಾಟಿ ಹಾಗು 2.56 ಲಕ್ಷ ರೂ. ನಗದು ಕಳವು ಮಾಡಲಾಗಿದೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅರಣ್ಯ ಇಲಾಖೆಯಿಂದ ಬೆಳೆ ನಾಶ: ಪರಿಹಾರಕ್ಕಾಗಿ ಪ್ರತಿಭಟನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಅನುಭೋಗದಲ್ಲಿರುವ ಗೋಮಾಳ ಜಮೀನನ್ನು ತೆರವುಗೊಳಿಸಿ ಬೆಳೆದಿದ್ದ ಮೆಕ್ಕೆಜೋಳ ಹಾಗೂ ಇತರೆ ಬೆಳೆಗಳನ್ನು ನಾಶ ಮಾಡಿರುವುದಕ್ಕೆ ಪರಿಹಾರ ನೀಡುವಂತೆ ಒತ್ತಾಯಿಸಿ ತಾಲ್ಲೂಕಿನ ಸಾವಂತನಹಳ್ಳಿ ಗ್ರಾಮದ ರೈತರು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ತಾಲ್ಲೂಕಿನ ಸಾವಂತನಹಳ್ಳಿ ಬಳಿಯ ಗೋಮಾಳ ವಿಚಾರದ ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿದ್ದರೂ, ಅರಣ್ಯಾಧಿಕಾರಿಗಳು ದಾಳಿ ನಡೆಸಿ ಜಮೀನಿನಲ್ಲಿ ಬೆಳೆದಿದ್ದ ಮೆಕ್ಕೆಜೋಳ ಸೇರಿ ಇತರೆ ಬೆಳೆಯನ್ನು ಜೆಸಿಬಿ ಯಂತ್ರಗಳ ಮೂಲಕ ನಾಶ ಮಾಡಿರುವುದು ಖಂಡನೀಯ. ಬೆಳೆ ಹಾನಿ ಮಾಡಿರುವವರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಬಡ ಕುಟುಂಬಗಳಿಗೆ ಸೂಕ್ತ ರಕ್ಷಣೆ, ನ್ಯಾಯ ದೊರಕಿಸಿಕೊಡುವಂತೆ



ಆಗ್ರಹಿಸಿದರು.

ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಎಸ್.ದ್ಯಾವೇಗೌಡ ಮಾತನಾಡಿ, ಸಾವಂತನಹಳ್ಳಿ ಗ್ರಾಮದ ಸರ್ವೆ ನಂ.99 ರಲ್ಲಿರುವ ಗೋಮಾಳದಲ್ಲಿ 40-50 ವರ್ಷಗಳಿಗೂ ಮೇಲ್ಪಟ್ಟು ಹಲವು ರೈತರು ಸಾಗುವಳಿ ಮಾಡುತ್ತಾ ಅನುಭೋಗದಲ್ಲಿದ್ದಾರೆ. ಜಾಗದ ಸಂಬಂಧ ಮಂಜೂರಾತಿ ಪತ್ರ ಮತ್ತು ಖಾತಾ ಆದೇಶ ಹೊಂದಲು ಸಾಧ್ಯವಾಗದ ಕಾರಣ ಗ್ರಾಮಸ್ಥರು ಹೈಕೋರ್ಟ್ ಮೊರೆ ಹೋಗಿದ್ದಾರೆ. ಆದರೆ, ಅನುಭೋಗದಲ್ಲೇ ಇಲ್ಲದ ಬೇರೆಯವರು ತಮಗೆ ಮಂಜೂರಾಗಿದೆ ಎಂದು ನಕಲಿ ದಾಖಲಾತಿ ಸೃಷ್ಟಿಸಿಕೊಂಡು ತೊಂದರೆ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಈ ಭೂಮಿ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಿದ್ದರೂ, ದಾಖಲಾತಿ ಲಭ್ಯವಿಲ್ಲ ಎಂದು ಹಿಂಬರಹ ನೀಡಿರುವ ಅಧಿಕಾರಿಗಳು, ಅದೇ ಗೋಮಾಳದ ಜಮೀನನ್ನು ಕಾನೂನುಬಾಹಿರವಾಗಿ ಅರ್ಹರಲ್ಲದವರಿಗೆ ಮಂಜೂರು ಮಾಡಿರುವುದಾಗಿ ಆದೇಶ ಮಾಡಿರುವುದು ಹೇಗೆ ಎಂದು ಪ್ರಶ್ನಿಸಿದ ಅವರು, ಇದರಿಂದ ರೈತರಿಗೆ ಅನ್ಯಾಯವಾಗಿದೆ. ಇದರ ವಿರುದ್ಧ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ, ತಹಶೀಲ್ದಾರ್ ಕಚೇರಿಗಳ ಎದುರು ಸಾಕಷ್ಟು ಬಾರಿ ಪ್ರತಿಭಟನೆ ನಡೆಸಿದ್ದರೂ, ಯಾರಿಂದಲೂ ನ್ಯಾಯ ಸಿಕ್ಕಿಲ್ಲ ಎಂದು ದೂರಿದರು.

ಇದರ ನಡುವೆ ಆ.1 ರಂದು ಅರಣ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ಜಮೀನಿನಲ್ಲಿದ್ದ ಬೆಳೆ ನಾಶ ಮಾಡಿದ್ದಾರೆ. ಬೆಳೆ ಕಟಾವು ಮಾಡಿಕೊಳ್ಳಲು ಅವಕಾಶ ಕೇಳಿದರೂ ಕೊಡದೆ ಸರ್ವಾಧಿಕಾರಿಯಂತೆ ವರ್ತಿಸಿದರು. ಈ ಪ್ರಕರಣ ನ್ಯಾಯಾಲಯದಲ್ಲಿರುವುದರಿಂದ ಅಂತಿಮ ತೀರ್ಮಾನ ಆಗುವವರೆಗೂ ಹಾಗೂ ನಮ್ಮ ಹೋರಾಟ ತಾರ್ಕಿಕ ಅಂತ್ಯ ಕಾಣುವವರೆಗೂ ಅನುಭೋಗದಲ್ಲಿರುವ ಗ್ರಾಮಸ್ಥರನ್ನು ಗೋಮಾಳದ ಜಮೀನಿನಿಂದ ತೆರವುಗೊಳಿಸಬಾರದು. ಅಲ್ಲೀವರೆಗೂ ಬಲವಂತದ ಕ್ರಮ ಜರುಗಿಸದಂತೆ ಸಂಬಂಧಪಟ್ಟ ಅರಣ್ಯ ಹಾಗೂ ಕಂದಾಯ ಇಲಾಖಾಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿ ಗ್ರಾಮಸ್ಥರ ಹಿತ ರಕ್ಷಿಸಿ ನ್ಯಾಯ ದೊರಕಿಸಿಕೊಡುವಂತೆ ಮನವಿ ಮಾಡಿದರು.

# ಹಿಂದು ಮಹಾಗಣಪತಿ ಸಮಿತಿಯಿಂದ ಜಾಗೃತಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಗಣಪತಿ ಪ್ರತಿಷ್ಠಾಪನೆ ಮೂಲಕ ಹಿಂದು ಸಮಾಜದಲ್ಲಿ ಜಾಗೃತಿ ಮೂಡಿಸುತ್ತಿರುವ ರಾಮದೂತ ಹಿಂದು ಮಹಾಗಣಪತಿ ಸಮಿತಿ ನಿರಂತರವಾಗಿ ಮಾಡುತ್ತ ಬಂದಿದೆ ಎಂದು ಮುಖಂಡ ಕೌಶಿಕ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 8 ವರ್ಷಗಳಿಂದ ರಾಮದೂತ ಹಿಂದು ಮಹಾಗಣಪತಿ ಸಮಿತಿಯವರು ಸಕಲೇಶಪುರದ ಗುರುವೇಗೌಡ ಕಲ್ಯಾಣ ಮಂಟಪ ಆವರಣದಲ್ಲಿರುವ ಕಮಲ್ ದೇವ್ ಕ್ಲಿನಿಕ್ ಮುಂಭಾಗದಲ್ಲಿ ಗಣಪತಿ ಪ್ರತಿಷ್ಠಾಪನೆ ಮಾಡಲಾಗುತ್ತಿದೆ ಎಂದರು.

ಸ್ವಾತಂತ್ರ್ಯ ಪೂರ್ವದಲ್ಲಿ ಬಾಲಗಂಗಾಧರ ತಿಲಕ್ ಅಂತವರು ಧಾರ್ಮಿಕ ಶಕ್ತಿಯನ್ನು ಬಲಗೊಳಿಸಿ ಸ್ವಾತಂತ್ರ್ಯ ಚಳವಳಿಗೆ ಪ್ರೇರಣೆಯಾದಂತೆ, ಇಂದು ಸಮಾಜದಲ್ಲಿ ನಡೆಯುತ್ತಿರುವ ಅಜಾಗೃತೆ , ಹಿಂದುಗಳ ಮೇಲಿನ ದೌರ್ಜನ್ಯ, ಕೊಲೆ, ಲವ್ ಜಿಹಾದ್, ಲ್ಯಾಂಡ್ ಜಿಹಾದ್‌ನಂತಹ ಸಾಮಾಜಿಕ ಪಿಡುಗುಗಳನ್ನು ಹೋಗಲಾಡಿಸಲು ಸಂಕಲ್ಪ ಬದ್ಧರಾಗಿ ರಾಮದೂತ ಹಿಂದು ಮಹಾಗಣಪತಿ ಸಮಿತಿಯವರು ಕಳೆದ 8 ವರ್ಷಗಳಿಂದ ಗಣಪತಿ ಪ್ರತಿಷ್ಠಾಪನೆ ಮೂಲಕ ಜನಜಾಗೃತಿ ಮೂಡಿಸುತ್ತಿದ್ದಾರೆ ಎಂದು ವಿವರಿಸಿದರು.

ರಾಮದೂತ ಮಹಾಗಣಪತಿಯ ಸಂಚಾಲಕ ಪ್ರದೀಪ್ ಪೂಜಾರಿ ಮಾತನಾಡಿ, ಈ ಬಾರಿಯ ಕಾರ್ಯಕ್ರಮದಲ್ಲಿ




ಸಕಲೇಶಪುರ ತಾಲ್ಲೂಕಿನ ಎಲ್ಲ ಗಣಪತಿ ಸಮಿತಿಗಳಿಗೆ ವಿನಂತಿಯೆಂದರೆ ಆ. 31ರ ತಮ್ಮ ತಮ್ಮ ಗ್ರಾಮ/ವಾರ್ಡ್‌ಗಳಲ್ಲಿ ಗಣಪತಿ ಮೂರ್ತಿ ವಿಸರ್ಜನೆ ಮಾಡಬಾರದು. ಬದಲಿಗೆ, ನಿಮ್ಮ ಕುಟುಂಬದೊಂದಿಗೆ ಬೃಹತ್ ಶೋಭಾಯಾತ್ರೆಯಲ್ಲಿ ಭಾಗವಹಿಸಿ ಮೆರವಣಿಗೆಯ ಶೋಭೆ ಹೆಚ್ಚಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಮನವಿ ಮಾಡುತ್ತೇವೆ ಎಂದರು.

ರಾಮದೂತ ಹಿಂದು ಮಹಾಗಣಪತಿ ವಿಸರ್ಜನಾ ಕಾರ್ಯಕ್ರಮವು ರಾಜ್ಯ ಮಟ್ಟದಲ್ಲಿಯೇ ಮಾದರಿಯಾಗಬೇಕೆಂಬ ನಿಟ್ಟಿನಲ್ಲಿ ಸಕಲೇಶಪುರದ ಸಮಸ್ತ ಹಿಂದು ಸಮಾಜದವರ ಸಹಕಾರ ಬೇಕಾಗಿದೆ ಎಂದು ಹೇಳಿದರು.

ರಾಮದೂತ ಹಿಂದು ಮಹಾಗಣಪತಿ ಸಮಿತಿಯ ಕಬ್ಬಿನಗದ್ದೆ ಮಂಜುನಾಥ್ ಹಾಗೂ ಶೇಖರ್ ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ತಂತ್ರಜ್ಞಾನ ಕಲಿಕೆಗೆ ಗಮನ ಹರಿಸಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ವಿದ್ಯಾರ್ಥಿಗಳು ಬಾಲ್ಯದಲ್ಲೇ ತಂತ್ರಜ್ಞಾನ ಮಾಹಿತಿ ಕಲಿಯಲಿ ಎಂಬ ಉದ್ದೇಶದಿಂದ ಹಂಜಳಿಗೆ ಕಾಳಿಂಗಪ್ಪ ವೆಲ್‌ಫೇರ್ ಅಸೊಸಿಯೇಷನ್ ಸಂಸ್ಥೆಯಡಿ ಸ್ಮಾರ್ಟ್ ಕ್ಲಾಸ್ ಬೇಕಾಗಿರುವ ಉಪಕರಣಗಳನ್ನು ಉಚಿತವಾಗಿ ನೀಡಲಾಗುತ್ತಿದೆ ಎಂದು ಅಸೋಷಿಯೇಷನ್ ಮುಖ್ಯಸ್ಥ ಮಂಜುನಾಥ್ ತಿಳಿಸಿದರು.

ಭೈರಾಪುರ ಸರ್ಕಾರಿ ಶಾಲೆಗೆ ಸ್ಮಾರ್ಟ್ ಕ್ಲಾಸ್ ತೆರೆಯಲು ಉಪಕರಣಗಳನ್ನು ವಿತರಿಸಿ ಮಾತನಾಡಿ, ಸುಮಾರು 2012 ರಿಂದ ನಮ್ಮ ನಡೆ ಸರ್ಕಾರಿ ಶಾಲೆ ಕಡೆ ಎಂಬ ಧ್ಯೇಯವನ್ನಿಟ್ಟುಕೊಂಡು ಸರ್ಕಾರಿ ಶಾಲೆಗಳನ್ನು ಉಳಿಸುವ ಉದ್ದೇಶದಿಂದ ತಾಲ್ಲೂಕಿನ 17 ಶಾಲೆಗಳಿಗೆ ಸ್ಮಾರ್ಟ್ ಕ್ಲಾಸ್, 166 ಶಾಲೆಗಳ ವಿದ್ಯಾರ್ಥಿಗಳಿಗೆ 1.25 ಲಕ್ಷ ನೋಟ್ ಬುಕ್, 6000



ಬ್ಯಾಗ್‌ಗಳನ್ನು ವಿತರಿಸಲಾಗಿದೆ. ಮಾಹಿತಿ ತಂತ್ರಜ್ಞಾನವನ್ನು ಬಾಲ್ಯದಲ್ಲೆ ಕಲಿಸಬೇಕೆಂಬ ಉದ್ದೇಶದಿಂದ ಹಲವು ಸರ್ಕಾರಿ ಶಾಲೆಗಳಿಗೆ ಸ್ಮಾರ್ಟ್ ಕ್ಲಾಸ್ ಗೆಂದು ಉಚಿತವಾಗಿ ಲ್ಯಾಪ್‌ಟಾಪ್, ಬೃಹತ್ ಟಿವಿ, ಪ್ರಿಂಟರ್ ಕೊಡುಗೆ ನೀಡುತ್ತಾ ಸರ್ಕಾರಿ ಶಾಲೆಗಳನ್ನು ಪ್ರೋತ್ಸಾಹಿಸುತ್ತಿದ್ದೇನೆ. ವಿಶೇಷವಾಗಿ ಎಲ್.ಕೆ.ಜಿ. ಮತ್ತು ಯು.ಕೆ.ಜಿ. ಮಕ್ಕಳಿಗೆ ಆಂಗ್ಲ ಶಿಕ್ಷಣ ಬೋಧಿಸಲು ಬೇಕಾದ ಕಂಪ್ಯೂಟರ್ ಉಪಕರಣಗಳನ್ನು ಕೊಡುತ್ತಿರುವುದಲ್ಲದೆ, ಅವುಗಳ ದುರಸ್ತಿ ಜವಾಬ್ದಾರಿ ನನ್ನದಾಗಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎ.ಜೆ. ಕೃಷ್ಣೇಗೌಡ ಮಾತನಾಡಿ, ಹಂಜಳಿಗೆ ಕಾಳಿಂಗಪ್ಪ ಅಸೋಸಿಯೇಷನ್ ವತಿಯಿಂದ ಜಾಗತೀಕರಣದ ಹಿನ್ನೆಲೆಯಲ್ಲಿ ಪ್ರತಿ ಮಗು ತಂತ್ರಜ್ಞಾನದಿಂದ ವಂಚಿತರಾಗಬಾರದು ಎಂಬ ಮೂಲ ಉದ್ದೇಶ ಹೊಂದಿದ್ದಾರೆ. ಯಾವುದೆ ಫಲಾಪೇಕ್ಷೆಯಿಲ್ಲದೆ ಸಹಕಾರ ನೀಡುತ್ತಿರುವುದು ಶ್ಲಾಘನೀಯ ಎಂದರು.

ಭೈರಾಪುರ ಶಾಲೆಗೆ ದ್ವಿಭಾಷ ಮಾಧ್ಯಮ ಮಂಜೂರಾಗಿದ್ದು, ಇಂಗ್ಲೀಷ್ ಮಾಧ್ಯಮ ಒಂದನೆ ತರಗತಿಯಿಂದಲೆ ಪ್ರಾರಂಭವಾಗಿದೆ. ಸಾವಿರಾರು ರೂ. ಖರ್ಚು ಮಾಡಿ ಖಾಸಗಿ ಶಾಲೆಗೆ ಪೋಷಕರು ತಮ್ಮ ಮಕ್ಕಳನ್ನು ದಾಖಲಿಸುವ ಬದಲು, ಸರ್ಕಾರಿ ಶಾಲೆಗಳಿಗೆ ದಾಖಲಿಸಿ ಉತ್ತಮ ಶಿಕ್ಷಣ ಪಡೆಯಿರಿ ಎಂದರು.

ಆಲೂರು ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷ ನವೀನ್ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಜ್ಞಾನ ವೃದ್ಧಿಯಾಗಲು ದಿನಪತ್ರಿಕೆಗಳು ಸಹಕಾರಿಯಾಗಲಿವೆ ಎಂಬ ಉದ್ದೇಶದಿಂದ ಎಲ್ಲ ವಿದ್ಯಾರ್ಥಿಗಳಿಗೆ ಪ್ರತಿದಿನ ಉಚಿತವಾಗಿ ದಿನಪತ್ರಿಕೆ ಕೊಡುತ್ತೇನೆ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ಚಂದ್ರೇಗೌಡ, ಮುಖ್ಯ ಶಿಕ್ಷಕಿ ಎಲಿಜಬೆತ್, ನವೀನ್, ವೀರಭದ್ರಸ್ವಾಮಿ ಮತ್ತಿತರರಿದ್ದರು.

# ರಾಜಿ ಸಂಧಾನದಿಂದ ಸಮಯ-ಹಣ ಉಳಿತಾಯ: ನ್ಯಾಯಾಧೀಶೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮಧ್ಯಸ್ಥಿಕೆಯು ರಾಜಿ ಸಂಧಾನದ ಮೂಲಕ ಕಡಿಮೆ ಅವಧಿಯಲ್ಲಿ ಪ್ರಕರಣಗಳನ್ನು ಶೀಘ್ರ ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ. ಇದರಿಂದ ಉಭಯ ಕಕ್ಷಿದಾರರ ಸಮಯ, ಹಣದ ಉಳಿತಾಯವಾಗುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಹೇಮಾವತಿ ತಿಳಿಸಿದರು.

ರಾಷ್ಟ್ರವ್ಯಾಪಿ 90 ದಿನಗಳ ಕಾಲ ನಡೆಯುತ್ತಿರುವ ವಿಶೇಷ ಮಧ್ಯಸ್ಥಿಕೆ ಆಂದೋಲನದ ಬಗ್ಗೆ ಮಾಹಿತಿ ನೀಡಿದ ಅವರು, ಈ ಆಂದೋಲನದ ಸದುಪಯೋಗವನ್ನು ಉಭಯ ಕಕ್ಷಿದಾರರು ಪಡೆದುಕೊಳ್ಳಬಹುದಾಗಿದೆ. ತರಬೇತಿ ಹೊಂದಿದ ವಕೀಲರು ತಟಸ್ಥವಾಗಿ ಮಧ್ಯಸ್ಥಿಕೆ ಮಾಡುವ ಮೂಲಕ ವಿವಾದವನ್ನು ಸೃಜನಾತ್ಮಕವಾಗಿ ಇತ್ಯರ್ಥಪಡಿಸಲು ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವರು ಎಂದು ತಿಳಿಸಿದರು.



ಈ ಪ್ರಕ್ರಿಯೆಯಲ್ಲಿ ಕಕ್ಷಿದಾರರು ಮತ್ತವರ ವಕೀಲರು ಸಕ್ರಿಯವಾಗಿ ಪಾಲ್ಗೊಳ್ಳಲು ವಿಶಿಷ್ಟ ಅವಕಾಶ ಕಲ್ಪಿಸಲಾಗುತ್ತದೆ. ಮಧ್ಯಸ್ಥಿಕೆಯು ಸ್ವಪ್ರೇರಿತವಾದುದಲ್ಲದೆ ಗೌಪ್ಯವಾದುದಾಗಿದೆ ಹಾಗೂ ಪಾರದರ್ಶಕತೆಯಿಂದ ಕೂಡಿದೆ. ಮಧ್ಯಸ್ಥಿಕೆಯಲ್ಲಿ ಕಾಯ್ದೆಯ ನಿಯಮಗಳು ಮತ್ತು ಸಾಕ್ಷ್ಯಗಳ ಬಗ್ಗೆ ಗಮನ ಕೊಡುವುದರ ಬದಲಾಗಿ ಮಧ್ಯಸ್ಥಿಕೆಯು ಕಕ್ಷಿದಾರರ ಹಿತಾಸಕ್ತಿ ಬಗ್ಗೆ ಗಮನ ಹರಿಸಲಾಗುವುದು. ಅಲ್ಲದೇ ಕಕ್ಷಿದಾರರು ತಾವೇ ವಿವಾದವನ್ನು ಇತ್ಯರ್ಥಗೊಳಿಸಿಕೊಳ್ಳಲು ಶಕ್ತರಾಗುವಂತೆ ಮಾಡುತ್ತದೆ ಎಂದು ಹೇಳಿದರು.

ಮಧ್ಯಸ್ಥಿಕೆಯಲ್ಲಿ ಕಡಿಮೆ ಕಾಲಮಿತಿಯಲ್ಲಿ ಆಪ್ತ ಸಮಾಲೋಚನೆ ಮೂಲಕ ನಡೆಯುವುದರಿಂದ ಅರ್ಥಪೂರ್ಣ ಚರ್ಚೆ ನಡೆದು ಪ್ರಕರಣವು ಶೀಘ್ರ ಮತ್ತು ವ್ಯಾಜ್ಯ ಮುಕ್ತವಾಗಿ ಬಗೆಹರಿಯಲು ಸಹಾಯವಾಗುತ್ತದೆ. ಮಧ್ಯಸ್ಥಿಕೆಯಲ್ಲಿ ಕೌಟುಂಬಿಕ ಪ್ರಕರಣಗಳು, ಸಿವಿಲ್ ವ್ಯಾಜ್ಯಗಳು, ವಿಚ್ಛೇಧನ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು ಇವುಗಳನ್ನು ಬಗೆಹರಿಸಬಹುದಾಗಿದೆ. 90 ದಿನಗಳ ವಿಶೇಷ ಮಧ್ಯಸ್ಥಿಕೆಯು ಪ್ರತಿ ದಿನವೂ ನಡೆಯಲಿದೆ. ನ್ಯಾಯಾಲಯಗಳಲ್ಲಿ ಬಾಕಿಯುಳಿದಿರುವ ಪ್ರಕರಣಗಳ ಸಂಖ್ಯೆಯನ್ನು ಕಡಿಮೆ ಮಾಡುವ ಉದ್ದೇಶವನ್ನು ಹೊಂದಿದೆ. ಆದ್ದರಿಂದ ವಕೀಲರು ತಮ್ಮ ಕಕ್ಷಿದಾರರ ಮನವೊಲಿಸುವ ಮೂಲಕ ಮಧ್ಯಸ್ಥಿಕೆಯ ವಿಶೇಷ ಆಂದೋಲನವನ್ನು ಸದುಪಯೋಗ ಪಡಿಸಿಕೊಳ್ಳುವಂತೆ ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಜಿ.ಕೆ.ದಾಕ್ಷಾಯಿಣಿ ಇದ್ದರು.

# ಕ್ರೀಡಾಂಗಣಕ್ಕಾಗಿ 2024ರಲ್ಲೇ ಪ್ರಸ್ತಾವನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲಾ ಕ್ರೀಡಾಂಗಣದಲ್ಲಿ ಹಾಕಿ ಮತ್ತು ಫುಟ್ಬಾಲ್ ಕ್ರೀಡಾಂಗಣಕ್ಕೆ 30 ಕೋಟಿ ರೂ. ವೆಚ್ಚದ ಪ್ರಸ್ತಾವನೆಯನ್ನು 2024 ಅಕ್ಟೋಬರ್ 14 ರಂದು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ ಎಂದು ಶಾಸಕ ಹೆಚ್.ಪಿ. ಸ್ವರೂಪ್ ತಿಳಿಸಿದ್ದಾರೆ.

ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಕ್ರೀಡಾ ಹಾಗೂ ಯುವ ವ್ಯವಹಾರಗಳ ಸಚಿವ ಡಾ.ಮನ್ಸುಖ್ ಮಾಂಡವೀಯ ಅವರೊಂದಿಗೆ ಚರ್ಚಿಸಿದ್ದು, ಮೊದಲ ಕಂತಿನಲ್ಲಿ 10 ಕೋಟಿ ರೂ. ಬಿಡುಗಡೆಗೆ ಒಪ್ಪಿಗೆ ದೊರೆತಿದೆ ಎಂದಿದ್ದಾರೆ.

ಜಿಲ್ಲಾ ಕ್ರೀಡಾಂಗಣ 30.06 ಎಕರೆ ವಿಸ್ತೀರ್ಣ ಇದೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಈಗಾಗಲೇ ವಿವಿಧ ರೀತಿಯ ಮೂಲಸೌಲಭ್ಯ ಕಲ್ಪಿಸಿದೆ. ಜೊತೆಗೆ ಫುಟ್ಬಾಲ್, ಹಾಕಿ, ವಾಲಿಬಾಲ್ ಕ್ರೀಡಾಕೂಟ ಹಾಗೂ ತಾಲೀಮಿಗೆಂದು ಆಟದ ಮೈದಾನಗಳನ್ನೂ ನಿರ್ಮಾಣ



ಮಾಡಿದೆ. ಹೀಗಾಗಿ ಇಲ್ಲಿ ವಿವಿಧ ಕ್ರೀಡಾಕೂಟ ನಡೆಸಲು ಉತ್ತಮ ವ್ಯವಸ್ಥೆ ಇದೆ. ಜೊತೆಗೆ ಉತ್ತಮ ಹಾಗೂ ಸದೃಢ ಆರೋಗ್ಯ ಕಾಪಾಡಿಕೊಳ್ಳಲು ವಾಯುವಿಹಾರ, ಕ್ರೀಡೆಗಾಗಿ ಉತ್ತಮ ವೇದಿಕೆ ಇದಾಗಿದೆ ಎಂದು ಹಿಂದೆಯೇ ಕೇಂದ್ರ ಸರ್ಕಾರಕ್ಕೆ ಮನವರಿಕೆ ಮಾಡಿಕೊಡಲಾಗಿದೆ ಎಂದು ತಿಳಿಸಿದ್ದಾರೆ.

ಮುಂದುವರಿದು ಜಿಲ್ಲಾ ಕ್ರೀಡಾಂಗಣದಲ್ಲಿ ಹಾಕಿ ಕೋರ್ಟ್ ಹಾಗೂ ಫುಟ್ಬಾಲ್ ಮೈದಾನ ಇದ್ದು, ನೂರಾರು ಹಿರಿಯ ಹಾಗೂ ಯುವ ಆಟಗಾರರು ಇಲ್ಲಿ ಪ್ರತಿದಿನ ಅಭ್ಯಾಸ ಮಾಡುತ್ತಾರೆ. ಇಲ್ಲಿ ಅಭ್ಯಾಸ ಮಾಡಿದವರು ರಾಜ್ಯ ಮತ್ತು ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಭಾಗಿಯಾಗಿ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಇನ್ನೂ ಕೆಲವರು ದೇಶ ಮಟ್ಟದ ಶಿಬಿರಗಳಲ್ಲಿ ತರಬೇತಿಗೆ ಆಯ್ಕೆ ಆಗಿದ್ದಾರೆ. ಮತ್ತೆ ಕೆಲವರು ವಿವಿಧ ಕ್ರೀಡಾಕ್ಲಬ್‌ಗಳಿಗೆ ಆಯ್ಕೆಯಾಗಿ ಕ್ರೀಡಾ ಸ್ಫೂರ್ತಿ ಮೆರೆಯುತ್ತಿದ್ದಾರೆ.

ವಿಶೇಷವಾಗಿ ಫುಟ್‌ಬಾಲ್ ಮತ್ತು ಹಾಕಿ ಆಟಗಳಿಗೆ ಪೂರಕವಾದ ಅತ್ಯುತ್ತಮ ವಾತಾವರಣ ಕಲ್ಪಿಸಬೇಕು. ಕ್ರೀಡಾ ಮೈದಾನಗಳನ್ನು ಮೇಲ್ದರ್ಜೆಗೇರಿಸಿ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಕ್ರೀಡಾಕೂಟ ನಡೆಸಲು ಅನುಕೂಲ ಮಾಡಿಕೊಡಬೇಕಿದೆ. ಅದಕ್ಕಾಗಿ ಅಂತಾರಾಷ್ಟ್ರೀಯ ಗುಣಮಟ್ಟದ ಸಿಂಥೆಟಿಕ್ಸ್ ಮೈದಾನ ನಿರ್ಮಾಣ ಮಾಡುವುದು ಅಗತ್ಯವಿದೆ. ಅದಕ್ಕಾಗಿ 30 ಕೋಟಿ ವೆಚ್ಚವಾಗಲಿದೆ ಎಂದು ಲೋಕೋಪಯೋಗಿ ಇಲಾಖೆ ಅಂದಾಜು ಪಟ್ಟಿ ತಯಾರಿಸಿದ್ದು, ಕೇಂದ್ರ ಸರ್ಕಾರದ ಖೇಲೋ ಇಂಡಿಯಾ ಯೋಜನೆಯಡಿ 30 ಕೋಟಿ ರೂ. ಅನುದಾನ ನೀಡಬೇಕೆಂದು ಮನವಿ ಮಾಡಲಾಗಿದೆ ಎಂದು ಸ್ವರೂಪ್ ತಿಳಿಸಿದ್ದಾರೆ.

# ಹೆದ್ದಾರಿಯಲ್ಲಿ ಸರಣಿ ಅಪಘಾತ: ಅಧ್ಯಯನಕ್ಕೆ ಸೂಚನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ರಾಷ್ಟ್ರೀಯ ಹೆದ್ದಾರಿ 75ರ ಮಾರನಹಳ್ಳಿಯಿಂದ ಗುಂಡ್ಯ ವರೆಗೆ ಸಂಭವಿಸುತ್ತಿರುವ ಸರಣಿ ಅಪಘಾತ ತಡೆಗೆ ಕಾರಣ ಹಾಗೂ ಪರಿಹಾರ ಮಾರ್ಗ ಕಂಡುಕೊಳ್ಳುವಂತೆ ರಾಷ್ಟ್ರೀಯ ಹೆದ್ದಾರಿ ಮುಖ್ಯ ಎಂಜಿನಿಯರ್ ಅಧೀನ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಶಾಸಕ ಸಿಮೆಂಟ್ ಮಂಜು ಅವರು ಇತ್ತೀಚೆಗೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಭೇಟಿಯಾಗಿ ಹೆದ್ದಾರಿಯಲ್ಲಿ ಸಂಭವಿಸುತ್ತಿರುವ ಅಪಘಾತ ಹಾಗು ಅವ್ಯವಸ್ಥೆ ಕುರಿತು ಗಮನ ಸೆಳೆದಿದ್ದರು.

ಕೆಲವು ದಿನಗಳ ಹಿಂದೆ ಕೆಎಸ್



ಆರ್‌ಟಿಸಿ ಬಸ್ ಹಾಗೂ ಖಾಸಗಿ ವಾಹನಗಳು ಅಪಘಾತಕ್ಕೀಡಾಗಿ ಅನಾಹುತ ಸಂಭವಿಸುತ್ತಿವೆ. ಅಪಘಾತ ಪ್ರಮಾಣ ಕಡಿಮೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಬೇಕು. ಸದರಿ ಆಕಾರ, ತಿರುವು ಹಾಗು ಇತರ ಭೌಗೋಳಿಕ ಸವಾಲುಗಳನ್ನು ಗಮನದಲ್ಲಿಟ್ಟುಕೊಂಡು ಕ್ರಮ ಜರುಗಿಸಬೇಕೆಂದು ಶಾಸಕರು ಮನವಿ ಮಾಡಿದ್ದರು.

ಎಚ್ಚರಿಕೆಯ ಫಲಕ ಹಾಗೂ ಚಿಹ್ನೆ ಅಳವಡಿಸಬೇಕು. ಅಗತ್ಯವಿದ್ದಲ್ಲಿ ವೇಗ ನಿಯಂತ್ರಣ ಕ್ರಮ (ಸ್ಪೀಡ್ ಬ್ರೇಕರ್, ರಂಬಲ್ ಸ್ಟ್ರಿಪ್ಸ್) ಜಾರಿಗೊಳಿಸಬೇಕು. ರಸ್ತೆಯ ದೃಶ್ಯತೆ ಸುಧಾರಣೆಗಾಗಿ ರಿಫ್ಲೆಕ್ಟಿವ್ ಸೂಚಕ ಮತ್ತು ಬೆಳಕಿನ ವ್ಯವಸ್ಥೆ ಮಾಡಬೇಕು. ಭಾಗದಲ್ಲಿ ನಿಯಮಿತ ನಿಗಾವಹಿಸಿ ಮತ್ತು ಸುಧಾರಣಾ ತಂಡ ನೇಮಿಸಬೇಕೆಂದು ಲೋಕೋಪಯೋಗಿ ಇಲಾಖೆಗೆ ಮನವಿ ಸಲ್ಲಿಸಿದ್ದರು. ಈ ಹಿನ್ನಲೆಯಲ್ಲಿ ಸ್ಥಳ ಪರಿಶೀಲಿಸಿ ವರದಿ ಸಲ್ಲಿಸುವಂತೆ ಹೆದ್ದಾರಿ ಮುಖ್ಯ ಎಂಜಿನಿಯರ್ ಆದೇಶಿಸಿದ್ದಾರೆ.

## ಜುಜೂಕೋರರ ಬಂಧನ

ಆಲೂರು: ತಾಲ್ಲೂಕಿನ ಗುಳ್ಳನ ಬೆಂಡೂರು ಗ್ರಾಮದಲ್ಲಿ ಸಾರ್ವಜನಿಕ ಸ್ಥಳದಲ್ಲಿ ಅಕ್ರಮವಾಗಿ ಜೂಜಾಡುತ್ತಿದ್ದ ನಾಲ್ವರನ್ನು ಬಂಧಿಸಿ ಪಣಕ್ಕಿಟ್ಟಿದ್ದ ಹಣವನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಅದೇ ಗ್ರಾಮದ ರವಿ, ಜಯಣ್ಣ, ಚಂದ್ರಶೇಖರ್ ಹಾಗು ಪ್ರಕಾಶ ಬಂಧಿತರು. ಪಣಕ್ಕಿಟ್ಟಿದ್ದ 1530 ರೂ. ವಶಪಡಿಸಿಕೊಳ್ಳಲಾಗಿದೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಹಾಸನ: ಚನ್ನರಾಯಪಟ್ಟಣ ತಾಲ್ಲೂಕು ದಂಡಿಗನಹಳ್ಳಿ ಕುಂದೂರು ಮಠ ಮುರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿನಿಗಳಾದ ಸಿ.ಹೆಚ್. ಸ್ಫೂರ್ತಿ ಕಿಕ್ ಬಾಕ್ಸಿಂಗ್‌ನಲ್ಲಿ ಹಾಗೂ ಕೆ.ಬಿ. ಆರ್ಯ ಮತ್ತು ಸಂಧ್ಯಾ ಆರ್.ಅಥ್ಲೆಟಿಕ್ಸ್ ನಲ್ಲಿ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ .

ವಿದ್ಯಾರ್ಥಿನಿಯರನ್ನು ಕತ್ತರಿಘಟ್ಟ ಆಧ್ಯಾತ್ಮಿಕ ಕೇಂದ್ರದ ಚಂದ್ರಶೇಖರ ಗುರೂಜಿ, ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಎನ್. ದೀಪ ಅಭಿನಂದಿಸಿದರು.

# ಕೊಳೆರೋಗ ಹತೋಟಿಗೆ ಬೆಳೆ ಪರಿವರ್ತನೆ ಮಾಡಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಶುಂಠಿ ಬೆಳೆಯಲ್ಲಿ ಕಂಡುಬರುವ ಕೊಳೆರೋಗ ಹತೋಟಿಗೆ ಬೆಳೆ ಪರಿವರ್ತನೆ ಮಾಡಬೇಕು. ಜಮೀನಿನ ಆಳವಾದ ಉಳುಮೆ, ಕೊಟ್ಟಿಗೆ ಗೊಬ್ಬರದೊಂದಿಗೆ ಜೈವಿಕ ಗೊಬ್ಬರ ಮತ್ತು ಬೇವಿನ ಹಿಂಡಿ ಹಾಕಬೇಕುವುದು ಉತ್ತಮ ಕ್ರಮವಾಗಿದೆ ಎಂದು ಕಾರೆಕೆರೆ ಕೃಷಿ ಮಹಾವಿದ್ಯಾಲಯ ಸಹಾಯಕ ಪ್ರಾಧ್ಯಾಪಕಿ ಡಾ. ಪೂಜಾ ಎಸ್.ಪಟೇಲ್ ರೈತರಿಗೆ ಸಲಹೆ ನೀಡಿದರು.

ತಾಲ್ಲೂಕಿನ ಹಂಪನಹಳ್ಳಿಯಲ್ಲಿ ಕಾರೆಕೆರೆ ಕೃಷಿ ಮಹಾವಿದ್ಯಾಲಯದ ಅಂತಿಮ ವರ್ಷದ ಕೃಷಿ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ಹಮ್ಮಿಕೊಂಡಿದ್ದ ರೋಗ ನಿರ್ಣಾಯಕ ಭೇಟಿ ಕಾರ್ಯಕ್ರಮದಲ್ಲಿ ಶುಂಠಿಯಲ್ಲಿ ಬರುವ ಕೊಳೆರೋಗದ ಬಗ್ಗೆ ವಿವರಣೆ ನೀಡಿದರು.

ಕೊಳೆ ರೋಗವು ಶಿಲೀಂಧ್ರದಿಂದ ಉಂಟಾಗುತ್ತದೆ. ಮೊದಲಿಗೆ ಎಲೆಗಳು ಹಳದಿ ಬಣ್ಣಕ್ಕೆ ತಿರುಗುತ್ತದೆ ನಂತರ ಶುಂಠಿ ಗಡ್ಡೆ ಕೊಳೆಯುತ್ತದೆ. ಈ ರೋಗವನ್ನು ನಿಯಂತ್ರಿಸಲು ರೋಗ ಬಂದಿರುವ ಗಿಡಗಳನ್ನು ಕಿತ್ತು ದೂರದಲ್ಲಿ ಸುಡಬೇಕು ಹಾಗು ಮ್ಯಾಂಕೋಜೆಬ್ ಸಿಂಪಡಿಸಬೇಕು ಮತ್ತು ಸಮಗ್ರ ರೋಗ ನಿರ್ವಹಣಾ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿಕೊಟ್ಟರು. ವಿದ್ಯಾರ್ಥಿಗಳು, ರೈತರು ಹಾಜರಿದ್ದರು.

## ಇತಿಹಾಸದಲ್ಲಿ ಈ ದಿನ

### ಆಗಸ್ಟ್-07

1905: ಬಂಗಾಳ ವಿಭಜನೆ ವಿರೋಧಿಸಿ ಸ್ವದೇಶಿ ಚಳವಳಿ ಆರಂಭವಾಯಿತು. ಈ ದಿನವನ್ನು ಭಾರತದ ಇತಿಹಾಸದಲ್ಲಿ ಸ್ವದೇಶಿ ದಿನ ಎಂದು ಗುರುತಿಸಲಾಗಿದೆ.

1942: ಮಹಾತ್ಮ ಗಾಂಧೀಜಿಯವರು ಮುಂಬೈನಲ್ಲಿ ಭಾರತ ಬಿಟ್ಟು ಹೋಗಿ ಚಳವಳಿಯನ್ನು ಆರಂಭಿಸಲು ಕರೆ ನೀಡಿದರು. ಅದಕ್ಕೆ ಮುಂದಿನ ದಿನದಿಂದಲೇ ದಂಡನೆಗಳು ಶುರುವಾಯಿತು.

1957: ದಕ್ಷಿಣ ಭಾರತದ ಮೊದಲ ಚಲನಚಿತ್ರ ರಂಗು ಕತೆ ಚಿತ್ರವಾದ ಕಾಣಚನಾ ತೆರೆ ಕಂಡಿತು.

2015: ಭಾರತದಲ್ಲಿ ಮೊದಲ ಬಾರಿ ಹಸ್ತಕಲಾ ದಿನ ಆಚರಣೆ ಪ್ರಾರಂಭವಾಯಿತು.

ಜನನ

1871: ಭಾರತದ ಮೊದಲ ರಾಷ್ಟ್ರಪತಿ ಡಾ. ರಾಜೇಂದ್ರ ಪ್ರಸಾದ್.

1904: ರಾಲ್ಫ್ ಬಂಚ್, ಅಮೆರಿಕದ ರಾಜತಂತ್ರಜ್ಞರು ಮತ್ತು ಶಾಂತಿಯ ನೊಬೆಲ್ ಪ್ರಶಸ್ತಿ ವಿಜೇತರಾಗಿದ್ದರು.

1942: ಟೋಬಿನ್ ಬೆಲ್, ಹಾಲಿವುಡ್ ನಟ

ಮರಣ

1941: ರವೀಂದ್ರನಾಥ ಟಾಗೋರ್, ಬಂಗಾಳದ ಮಹಾನ್ ಕವಿ, ಲೇಖಕ ಮತ್ತು ಚಿಂತನಶೀಲ. ಭಾರತೀಯರ ಮೊದಲ ನೊಬೆಲ್ ಪ್ರಶಸ್ತಿ ವಿಜೇತರು.

2000: ಜೋನ್ ಮಾರ್ಕಸ್, ಅಮೆರಿಕದ ಪ್ರಸಿದ್ಧ ನಟಿ.

# ಬೆಲೆ ಏರಿಕೆ: ಕಾಫಿ ಬೆಳೆಗೆ ಉತ್ಸಾಹ ತೋರಿದ ಬೆಳೆಗಾರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಜಾಗತಿಕ ಮಾರುಕಟ್ಟೆಯಲ್ಲಿ ಈ ಬಾರಿ ಕಾಫಿ ಧಾರಣೆ ದಾಖಲೆ ಬರೆದಿದ್ದರಿಂದ ಮಲೆನಾಡು, ಅರೆಮಲೆನಾಡು ಭಾಗದಲ್ಲಿ ಹೊಸದಾಗಿ ಕಾಫಿ ತೋಟ ಮಾಡುವವರ ಸಂಖ್ಯೆ ಹೆಚ್ಚುತ್ತಿದೆ.

ಕಾಫಿ ಬೆಲೆ ಸಾರ್ವಕಾಲಿಕ ದಾಖಲೆ ನಿರ್ಮಿಸಿದ್ದರಿಂದ ಹಲವು ವರ್ಷಗಳಿಂದ ಕಾಫಿ ಬೆಳೆಯ ಬಗ್ಗೆ ನಿರಾಶರಾಗಿದ್ದ ಬೆಳೆಗಾರರಲ್ಲಿ ಈಗ ಮತ್ತೊಮ್ಮೆ ಆಸಕ್ತಿ ಮೂಡಿದೆ. ಕಾಫಿ ಬೆಲೆ ಏರಿಕೆಯಂತೆ ಕಾಫಿ ಗಿಡಗಳ ಬೆಲೆ ಕೂಡ ದುಪ್ಪಟ್ಟಾಗಿದೆ. ಹಿಂದೆ 6 ರಿಂದ 10ರೂ.ಗೆ ಸಿಗುತ್ತಿದ್ದ ಗಿಡಗಳ ಬೆಲೆ ಈಗ 20 ರಿಂದ 25ರೂ.ಗೆ ತಲುಪಿದೆ.

ಕೆಲ ವರ್ಷಗಳಿಂದ ಬೆಲೆ ಕುಸಿದಿದ್ದರಿಂದ ಹಲವು ರೈತರು ತೋಟಗಳತ್ತ ಗಮನ ಹರಿಸಿರಲಿಲ್ಲ. ಆದರೆ, ಈಗ ಬೆಲೆ ಹೆಚ್ಚಾದ್ದರಿಂದ ಹೊಸದಾಗಿ ಗಿಡಗಳನ್ನು ನಾಟಿ ಮಾಡಲು ಮುಂದಾಗಿದ್ದಾರೆ. ಪಾಳು ಬಿದ್ದಿದ್ದ ಜಾಗ, ಭತ್ತದ ಗದ್ದೆಗಳನ್ನು ಕಾಫಿ ತೋಟವಾಗಿ ಪರಿವರ್ತಿಸಲು ಮುಂದಾಗಿರುವುದರಿಂದ ನರ್ಸರಿಗಳಲ್ಲಿ ಉತ್ತಮ ತಳಿಯ ಕಾಫಿ ಗಿಡಗಳಿಗೆ ಬೇಡಿಕೆ ಹೆಚ್ಚಾಗಿದೆ.

ಬೆಳೆಗಾರರು ಮುಖ್ಯವಾಗಿ ಹೈಬ್ರಿಡ್ ಮತ್ತು ಹೆಚ್ಚು ಇಳುವರಿ ನೀಡುವ ಕಾಫಿ ತಳಿಗಳನ್ನು ಬಯಸುತ್ತಿದ್ದಾರೆ. ಅದರಲ್ಲಿ, ಅರೇಬಿಕಾ ತಳಿಯಾದ ಚಂದ್ರಗಿರಿ, ಎಫ್-1 ಮತ್ತು ಕಾವೇರಿ (ಕ್ಯಟ್ಟೈಮೋರ್), ಹೇಮಾವತಿ ತಳಿಗಳಿಗೆ ಹೆಚ್ಚು ಬೇಡಿಕೆ ಇದೆ. ಈ ತಳಿಗಳು ಉತ್ತಮ ರೋಗ ನಿರೋಧಕ ಶಕ್ತಿ ಮತ್ತು ಅಧಿಕ ಇಳುವರಿಯನ್ನು ಹೊಂದಿವೆ. ರೊಬಸ್ಟಾ ತಳಿಯಾದ ಡ್ರಾಫ್ ರೊಬಸ್ಟಾ, ಸಿ ಇಂಟು ಆರ್, ಸೆಲೆಕ್ಷನ್, ಓಲ್ಡ್ ರೊಬಸ್ಟಾಗೆ ಭಾರೀ ಬೇಡಿಕೆ ಕಂಡು ಬಂದಿದೆ. ಇದು ಕೀಟ ಬಾಧೆಗೆ ಹೆಚ್ಚು ಪ್ರತಿರೋಧಕವಾಗಿದ್ದು ಉತ್ತಮವಾಗಿ ಬೆಳೆಯುತ್ತದೆ.



ಹೀಗಾಗಿ ಸಕಲೇಶಪುರ ಮತ್ತು ಆಲೂರು ತಾಲ್ಲೂಕಿನ ಮಲೆನಾಡು, ಅರೆಮಲೆನಾಡಿನಂತಹ ಪ್ರದೇಶಗಳಲ್ಲಿ ನರ್ಸರಿಗಳಲ್ಲಿ ಈಗಾಗಲೇ ಹೆಚ್ಚಿನ ಪ್ರಮಾಣದ ಕಾಫಿ ಗಿಡಗಳಿಗೆ ಬೇಡಿಕೆ ಬಂದಿದೆ. ಹಲವು ನರ್ಸರಿಗಳು ಮುಂಚಿತವಾಗಿಯೇ ಗಿಡಗಳನ್ನು ಕಾಯ್ದಿರಿಸಲು ಬೆಳೆಗಾರರಿಗೆ ಸೂಚಿಸುತ್ತಿವೆ.

ಗಿಡಗಳ ಬೆಲೆ ಏರಿಕೆ ನಿರೀಕ್ಷೆ ಮಾಡಿದ್ದ ಕೆಲವು ಬೆಳೆಗಾರರು ಒಗ್ಗು ಮಾಡಿ ತಾವೇ ಕಾಫಿ ಗಿಡಗಳನ್ನು ಬೆಳೆಸಿಕೊಂಡಿದ್ದಾರೆ.

### ಕಾಫಿ ತಳಿಗಳ ವಿಶೇಷತೆ

ಹಳೆಯ ಕಾಫಿ ತೋಟ ನವೀಕರಿಸುವವರಿಗೆ, ಅದರಲ್ಲೂ ಹೊಸ ಬೆಳೆಗಾರರಿಗೆ ಹಲವು ತಳಿಗಳ ಬಗ್ಗೆ ಕುತೂಹಲ ಮೂಡಿದೆ. ಅರೇಬಿಕಾ ಮತ್ತು ರೊಬಸ್ಟಾ ಇವೆರಡರಲ್ಲೂ ಹಲವು ಉಪತಳಿಗಳಿವೆ ಮತ್ತು ಪ್ರತಿಯೊಂದಕ್ಕೂ ತನ್ನದೆಯಾದ ವೈಶಿಷ್ಟ್ಯಗಳಿವೆ. ಅರೇಬಿಕಾ ಕಾಫಿ ಉತ್ತಮ ಪರಿಮಳ, ಕಡಿಮೆ ಹುಳಿ ಮತ್ತು ರುಚಿಗೆ ಹೆಸರುವಾಸಿಯಾಗಿದೆ. ಇವು ಎತ್ತರದ ಪ್ರದೇಶಗಳಲ್ಲಿ ಚೆನ್ನಾಗಿ ಬೆಳೆಯುತ್ತವೆ ಮತ್ತು ರೋಗ ನಿರೋಧಕ ಶಕ್ತಿ ಹೆಚ್ಚಾಗಿರುತ್ತದೆ ಹೀಗಾಗಿ ಹೆಚ್ಚಿನ ಬೇಡಿಕೆ ಇದೆ. ಇದರಲ್ಲಿ ಚಂದ್ರಗಿರಿ ತಳಿಯನ್ನು ಸೆಂಟ್ರಲ್ ಕಾಫಿ ರಿಸರ್ಚ್ ಇನ್ಸ್ಟಿಟ್ಯೂಟ್ (ಸಿಸಿಆರ್‌ಐ) ಅಭಿವೃದ್ಧಿಪಡಿಸಿದ ಪ್ರಮುಖ ಅರೇಬಿಕಾ ತಳಿಯಾಗಿದೆ. ಇದು ಹೆಚ್ಚು ಇಳುವರಿ ನೀಡುವ ಸಾಮರ್ಥ್ಯ ಮತ್ತು ಬಿಳಿ ಕಾಂಡದ ಕೀಟದಂತಹ ರೋಗಗಳಿಗೆ ಪ್ರತಿರೋಧ ನೀಡುವ ಶಕ್ತಿ ಹೊಂದಿರುವುದರಿಂದ ಇತ್ತೀಚೆಗೆ ಹೆಚ್ಚು ಜನಪ್ರಿಯವಾಗಿದೆ. ಕಾವೇರಿ (ಕ್ಯಟ್ಟೈಮೋರ್) ಇದು ಅರೇಬಿಕಾ ಮತ್ತು ರೊಬಸ್ಟಾ ತಳಿಯ ಹೈಬ್ರಿಡ್ ಆಗಿದೆ. ಇದು ಹೆಚ್ಚಿನ ಇಳುವರಿ ಮತ್ತು ರೋಗ ನಿರೋಧಕ ಶಕ್ತಿ ಹೊಂದಿದೆ. ಇದು ವಿವಿಧ ಹವಾಮಾನಗಳಲ್ಲಿ ಬೆಳೆಯಲು ಸೂಕ್ತವಾಗಿದೆ.

ರೊಬಸ್ಟಾ ಕಾಫಿಯು ಬಲವಾದ ಗಿಡಗಳು ಮತ್ತು ಕಹಿ ರುಚಿ, ಹೆಚ್ಚಿನ ಕೆಫೀನ್ ಅಂಶವನ್ನು ಹೊಂದಿದೆ. ಇದನ್ನು ಸಾಮಾನ್ಯವಾಗಿ ಕಡಿಮೆ ಎತ್ತರದ ಪ್ರದೇಶಗಳಲ್ಲಿ ಬೆಳೆಯಲಾಗುತ್ತದೆ ಮತ್ತು ಅರೇಬಿಕಾ ಕಾಫಿಗಿಂತ ಹೆಚ್ಚು ರೋಗ ಮತ್ತು ಕೀಟ ನಿರೋಧಕ ಶಕ್ತಿ ಹೊಂದಿದೆ. ಡ್ರಾಫ್ ರೊಬಸ್ಟಾ, ಸಿ ಇಂಟು ಆರ್, ಸೆಲೆಕ್ಷನ್, ಓಲ್ಡ್ ರೊಬಸ್ಟಾಗೆ ಬೇಡಿಕೆ ಇದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248